ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಆಯುಷ್ಮಾನ್ ಭಾರತ ಯೋಜನೆ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)

386 (561) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಆಸ್ಪತ್ರೆಗಳು ಆಯುಷ್ಮಾನ್ ಭಾರತ ಯೋಜನೆ ಅಡಿಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆ ಅಡಿಯಲ್ಲಿ ನೋಂದಣಿಯಾಗಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಚಿಕಿತ್ಸೆ ಪಡೆಯುವಲ್ಲಿ ಆಗುವ ವಿಳಂಬದಿಂದ ರೋಗಿಗಳ ಸಾವು-ನೋವಿನ ಸಂಖ್ಯೆ ಎಷ್ಟು ;

(ಈ) ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?